**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

**ತಾಂತ್ರಿಕ ಶಿಕ್ಷಣ ಇಲಾಖೆಯ ನಡವಳಿಗಳು**

**ವಿಷಯ:** ತಾಂತ್ರಿಕ ಶಿಕ್ಷಣ ಇಲಾಖೆಯ ಉಳಿದ ಮೂಲ ವೃಂದ ಮತ್ತು ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ ಕಾರ್ಯಾಗಾರ ವಿಭಾಗದಲ್ಲಿನ ವಿವಿಧ ವಿಭಾಗಗಳ ಸಹ ಶಿಕ್ಷಕರು(ಅಸಿಸ್ಟೆಂಟ್ ಇನ್‌ಸ್ಟ್ರಕ್ಟರ್) ಗಳಿಗೆ ಆಯಾ ವಿಭಾಗಗಳ ಶಿಕ್ಷಕರು (ಇನ್‌ಸ್ಟ್ರಕ್ಟರ್) ಹುದ್ದೆಗೆ ಸ್ಥಾನಪನ್ನ ಮುಂಬಡ್ತಿ ನೀಡುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಅಧಿಸೂಚನೆ ಸಂಖ್ಯೆ: ಡಿಟಿಇ/09/ಇಎಸ್‌ಟಿ(3)/2019, ದಿನಾಂಕ: 03.08.2019 ರಲ್ಲಿ ಪ್ರಕಟಿಸಲಾಗಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಸಹ ಶಿಕ್ಷಕರ ವೃಂದದ ಅಂತಿಮ ಜೇಷ್ಠತಾ ಪಟ್ಟಿ
2. ದಿನಾಂಕ: 31.05.2022 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು.
3. ಈ ಕಛೇರಿ ಜ್ಞಾಪನ ಸಂಖ್ಯೆ: DTE-ADMIOEST(4)/14/2021, ದಿನಾಂಕ: 31.05.2022

*****

**ಪ್ರಸ್ತಾವನೆ:**

ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಕಾರ್ಯಾಗಾರ ವಿಭಾಗದಲ್ಲಿನ ವಿವಿಧ ವಿಭಾಗಗಳ ಶಿಕ್ಷಕರು(ಇನ್‌ಸ್ಟ್ರಕ್ಟರ್) ಹುದ್ದೆಗಳಿಗೆ ಆಯಾ ವಿಭಾಗದ ಸಹ ಶಿಕ್ಷಕರು (ಅಸಿಸ್ಟೆಂಟ್ ಇನ್‌ಸ್ಟ್ರಕ್ಟರ್) ಹುದ್ದೆಯಿಂದ ಶೇಕಡ 50 ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ(1) ರಂತೆ ಪ್ರಕಟಿಸಲಾಗಿರುವ ತಾಂತ್ರಿಕ ಶಿಕ್ಷಣ ಇಲಾಖೆಯ ಸಹ ಶಿಕ್ಷಕರ ವೃಂದದ ಅಂತಿಮ ಜ್ಯೇಷ್ಠತಾ ಪಟ್ಟಿಯ ಅನುಸಾರ ಕಾರ್ಯಾಗಾರ ವಿಭಾಗದಲ್ಲಿನ ವಿವಿಧ ವಿಭಾಗಗಳ ಶಿಕ್ಷಕರು (ಇನ್‌ಸ್ಟ್ರಕ್ಟರ್) ವೃಂದದಲ್ಲಿ ಖಾಲಿಯಿರುವ ಹುದ್ದೆಗಳನ್ನು ಸ್ಥಾನಪನ್ನ ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ. ದಿನಾಂಕ: 31.05.2022 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿಯಿರುವ ವಿವಿಧ ವಿಭಾಗಗಳ ಶಿಕ್ಷಕರು(ಇನ್‌ಸ್ಟ್ರಕ್ಟರ್) ಹುದ್ದೆಗಳನ್ನು ಜೇಷ್ಠತೆ, ಅರ್ಹತೆ, ಮೀಸಲಾತಿ ನಿಯಮಗಳ ಆಧಾರದ ಮೇಲೆ ಅರ್ಹ ಆಯಾ ವಿಭಾಗಗಳ ಅರ್ಹ ಸಹ ಶಿಕ್ಷಕರುಗಳಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ತೀರ್ಮಾನಿಸಲಾಗಿದೆ.

ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನದಂತೆ ಆಯಾ ವಿಭಾಗಗಳ ಸಹ ಶಿಕ್ಷಕರ ವೃಂದದಿಂದ ಆಯಾ ವಿಭಾಗಗಳ ಶಿಕ್ಷಕರ ವೃಂದಕ್ಕೆ ಸ್ಥಾನಪನ್ನ ಬಡ್ತಿ ಹೊಂದಲು ಅರ್ಹರಿರುವ ಆಯಾ ವಿಭಾಗಗಳ ಸಹ ಶಿಕ್ಷಕರುಗಳಿಗೆ ಮುಂಬಡ್ತಿ ಹುದ್ದೆಯಲ್ಲಿ ಸ್ಥಳನಿಯುಕ್ತಿಗೊಳಿಸುವ ಸಲುವಾಗಿ 03 ಸ್ಥಳಗಳನ್ನು ಸೂಚಿಸಲು ಉಲ್ಲೇಖ(3) ರಲ್ಲಿ ಅವಕಾಶ ಕಲ್ಪಿಸಲಾಗಿತ್ತು. ಅದರಂತೆ ಸ್ಥಳ ಸೂಚಿಸಿರುವ ಸಹ ಶಿಕ್ಷಕರುಗಳಿಗೆ ಶಿಕ್ಷಕರ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ: DTE-ADMIOEST(4)/14/2021,** **ದಿನಾಂಕ: 03.06.2022**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ಈ ಕೆಳಕಂಡ ವಿವಿಧ ವಿಭಾಗಗಳ ಸಹ ಶಿಕ್ಷಕರುಗಳಿಗೆ ಗ್ರೂಪ್-ಸಿ ವೃಂದದ ರಾಜ್ಯ ವೇತನ ಶ್ರೇಣಿ ರೂ. 33450-850-36000-950-39800-1100-46400-1250-53900-1450-62600 ರಲ್ಲಿನ ಆಯಾ ವಿಭಾಗಗಳ ಶಿಕ್ಷಕರ ಹುದ್ದೆಗೆ ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ ಸ್ಥಾನಪನ್ನ ಬಡ್ತಿ ನೀಡಿ ಅವರ ಹೆಸರಿನ ಮುಂದೆ ಸೂಚಿಸಿರುವ ಖಾಲಿ ಹುದ್ದೆಗೆ ಎದುರಾಗಿ ಶೈಕ್ಷಣಿಕ ಹಿತದೃಷ್ಠಿಯಿಂದ ಈ ಕೂಡಲೇ ಜಾರಿಗೆ ಬರುವಂತೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

## ಉಳಿದ ಮೂಲ ವೃಂದ

| ಕ್ರ ಸಂ | ಸಹ ಶಿಕ್ಷಕರ ಹೆಸರು | ಕಾರ್ಯನಿರ್ವಹಿಸುತ್ತಿರುವ ಕಛೇರಿ / ಸಂಸ್ಥೆ | ಶಿಕ್ಷಕರ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಲಾದ ಸಂಸ್ಥೆ |
|---|---|---|---|
| ಸಿವಿಲ್ ಇಂಜಿನಿಯರಿಂಗ್ | | | |
| 1. | ಎ.ಜೆ. ರಂಗನಾಥಪ್ರಸಾದ್ | ವಿ.ಐ.ಎಸ್.ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಭದ್ರಾವತಿ | ಸರ್ಕಾರಿ ಪಾಲಿಟೆಕ್ನಿಕ್, ಸೊರಬ |
| ಆಟೋಮೊಬೈಲ್ | | | |
| 1. | ಮಲ್ಲಿಕಾರ್ಜುನ ದಿವಾನಮಳ್ | ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ | ಸರ್ಕಾರಿ ಪಾಲಿಟೆಕ್ನಿಕ್, ಬೆಳಗಾವಿ |
| ಕೆಮಿಕಲ್ | | | |
| 1 | ಎಸ್.ಮಹೇಶ್ | ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು | ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು |
| ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯೂನಿಕೇಷನ್ | | | |
| 1. | ಬಿ.ಎಸ್.ಪೂಜೇರಿ | ಸರ್ಕಾರಿ ಪಾಲಿಟೆಕ್ನಿಕ್, ಬೀಳಗಿ | ಸರ್ಕಾರಿ ಪಾಲಿಟೆಕ್ನಿಕ್, ಬೀಳಗಿ |
| 2. | ಶಂಕರಪ್ಪ ಎಲ್. ನಾಯ್ಕ | ಸರ್ಕಾರಿ ಪಾಲಿಟೆಕ್ನಿಕ್, ವಿಜಯಪುರ | ಸರ್ಕಾರಿ ಪಾಲಿಟೆಕ್ನಿಕ್, ಝಳಕಿ |
| 3. | ವಿರೂಪಾಕ್ಷ ಕೆ.ಮಠಪತಿ | ಸರ್ಕಾರಿ ಪಾಲಿಟೆಕ್ನಿಕ್, ಅಥಣಿ | ಸರ್ಕಾರಿ ಪಾಲಿಟೆಕ್ನಿಕ್, ಅಥಣಿ |
| 4. | ವಿವೇಕಾನಂದ ಹೆಚ್. ಬಂಕಾಪುರ | ಸರ್ಕಾರಿ ಪಾಲಿಟೆಕ್ನಿಕ್, ಹುಬ್ಬಳ್ಳಿ | ಸರ್ಕಾರಿ ಪಾಲಿಟೆಕ್ನಿಕ್, ಹುಬ್ಬಳ್ಳಿ |
| 5. | ಅಜಯ್ ಎಂ.ನಾತು | ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹುಬ್ಬಳ್ಳಿ | ಸರ್ಕಾರಿ ಪಾಲಿಟೆಕ್ನಿಕ್, ಮುಂಡಗೋಡ |
| 6. | ಜೆ.ಪಿ.ದಿನೇಶ್ | ಸರ್ಕಾರಿ ಎಸ್.ಕೆ.ಎಸ್.ಜೆ.ಟಿ.ಸಂಸ್ಥೆ, ಬೆಂಗಳೂರು | ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು |
| 7. | ಜೋಸೇಫ್ ಆರ್.ಹೊನ್ನಾಳಿ | ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಶಿರಾಳಕೊಪ್ಪ | ಸರ್ಕಾರಿ ಪಾಲಿಟೆಕ್ನಿಕ್, ಚನ್ನಸಂದ್ರ |
| 8. | ಕೆ.ವಿ.ಮನಮೋಹನ್ | ಸರ್ಕಾರಿ ಪಾಲಿಟೆಕ್ನಿಕ್, ನಾಗಮಂಗಲ | ಸರ್ಕಾರಿ ಪಾಲಿಟೆಕ್ನಿಕ್, ಉಡುಪಿ |
| 9. | ಅನಿಲ್‌ಕುಮಾರ್ ಎ.ಎನ್. | ಸರ್ಕಾರಿ ಪಾಲಿಟೆಕ್ನಿಕ್, ಚನ್ನಸಂದ್ರ | ಸರ್ಕಾರಿ ಪಾಲಿಟೆಕ್ನಿಕ್, ಮುಳಬಾಗಿಲು |
| 10. | ರಾಘವೇಂದ್ರ ಬಿ.ಡಿ. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕೆ.ಆರ್.ಪೇಟೆ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕೆ.ಆರ್.ಪೇಟೆ |
| 11. | ಕೆ.ಎಂ.ಮುನಿಕೃಷ್ಣಪ್ಪ | ಸರ್ಕಾರಿ ಪಾಲಿಟೆಕ್ನಿಕ್, ಮುಳಬಾಗಿಲು | ಸರ್ಕಾರಿ ಪಾಲಿಟೆಕ್ನಿಕ್, ಕೆ.ಜಿ.ಎಫ್. |
| 12. | ರಾಜೇಶ್ ಎನ್. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ | ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ರಾಮನಗರ |
| 13. | ವೆಂಕಟೇಶ್ ವಿ. | ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು | ಸರ್ಕಾರಿ ಪಾಲಿಟೆಕ್ನಿಕ್, ರಾಮನಗರ |
| 14. | ಲಿಂಗರಾಜು ಆರ್. | ಸರ್ಕಾರಿ ಪಾಲಿಟೆಕ್ನಿಕ್, ಅರಕೆರೆ(ಶ್ರೀರಂಗಪಟ್ಟಣ) | ಸರ್ಕಾರಿ ಪಾಲಿಟೆಕ್ನಿಕ್, ಅರಕೆರೆ(ಶ್ರೀರಂಗಪಟ್ಟಣ) |
| 15. | ಸುಧೀರ್ ಇ. | ಸರ್ಕಾರಿ ಪಾಲಿಟೆಕ್ನಿಕ್, ತುರುವೇಕೆರೆ | ಸರ್ಕಾರಿ ಪಾಲಿಟೆಕ್ನಿಕ್, ತುರುವೇಕೆರೆ |
| 16. | ಜೈಪ್ರಕಾಶ್ ಎಂ.ಎಸ್. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ | ಸರ್ಕಾರಿ ಪಾಲಿಟೆಕ್ನಿಕ್, ನಾಗಮಂಗಲ |

...3/-

| | | | |
|---|---|---|---|
| 17. | ಹೆಚ್.ಕೆ.ವೆಂಕಟೇಶ್ | ಸರ್ಕಾರಿ ಪಾಲಿಟೆಕ್ನಿಕ್, ಇಮ್ಮಡಿಹಳ್ಳಿ | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ |
| | | **ಎಲೆಕ್ಟ್ರಿಕಲ್ ಇಂಜಿನಿಯರಿಂಗ್** | |
| 1. | ಸುರೇಶ್‌ಬಾಬು ಡಿ.ಎಸ್. | ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು | ಸರ್ಕಾರಿ ಪಾಲಿಟೆಕ್ನಿಕ್, ತುಮಕೂರು |

**ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ**

| ಕ್ರ ಸಂ | ಸಹ ಶಿಕ್ಷಕರ ಹೆಸರು | ಕಾರ್ಯನಿರ್ವಹಿಸುತ್ತಿರುವ ಕಛೇರಿ / ಸಂಸ್ಥೆ | ಶಿಕ್ಷಕರ ಹುದ್ದೆಗೆ ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿಗೊಳಿಸಲಾದ ಸಂಸ್ಥೆ |
|---|---|---|---|
| | | **ಸಿವಿಲ್ ಇಂಜಿನಿಯರಿಂಗ್** | |
| 1. | ಮಧುಕೇಶ್ ಹೆಚ್. | ಸರ್ಕಾರಿ ಪಾಲಿಟೆಕ್ನಿಕ್, ಕಾರಟಗಿ | ಸರ್ಕಾರಿ ಪಾಲಿಟೆಕ್ನಿಕ್, ಕಾರಟಗಿ |
| | | **ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯೂನಿಕೇಷನ್** | |
| 1. | ವಹೀದಾ ಬೇಗಂ | ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ | ಸರ್ಕಾರಿ ಪಾಲಿಟೆಕ್ನಿಕ್, ಕಂಪ್ಲಿ |
| | | **ಎಲೆಕ್ಟ್ರಿಕಲ್ ಇಂಜಿನಿಯರಿಂಗ್** | |
| 1. | ಸಂಜೀವ್‌ಕುಮಾರ್ | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಕಲಬುರಗಿ | ಸರ್ಕಾರಿ ಪಾಲಿಟೆಕ್ನಿಕ್, ಬೀದರ್ |

ಮುಂಬಡ್ತಿ ಹೊಂದಿದ ಸಿಬ್ಬಂದಿಗಳು ಸ್ಥಾನಪನ್ನ ಮುಂಬಡ್ತಿ ಹುದ್ದೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 19(ಸಿ)ರ ಪ್ರಕಾರ ಒಂದು ವರ್ಷದ ಸ್ಥಾನಪನ್ನ ಅವಧಿಯನ್ನು ತೃಪ್ತಿಕರವಾಗಿ ಪೂರೈಸುವ ಷರತ್ತಿಗೊಳಪಟ್ಟಿದೆ.

ಬಡ್ತಿ ಹೊಂದಿರುವ ಸಹ ಶಿಕ್ಷಕರುಗಳು ಆದೇಶದ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಿಂದ ಪಡೆದು ಸ್ಥಳನಿಯುಕ್ತಿಗೊಳಿಸಲಾದ ಸಂಸ್ಥೆಯಲ್ಲಿ ಈ ಆದೇಶ ತಲುಪಿದ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಬಡ್ತಿಯು ಸ್ವಯಂಚಾಲಿತವಾಗಿ ರದ್ದಾಗುತ್ತದೆ

ಬಡ್ತಿ ಹೊಂದಿರುವ ಸಹ ಶಿಕ್ಷಕರುಗಳ ಪೈಕಿ ಯಾರಾದರೂ ಪ್ರಸ್ತುತ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ, ಸದರಿ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿದೆ.

ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

ಇವರಿಗೆ:-

1. ಸಂಬಂಧಪಟ್ಟ ಸಹ ಶಿಕ್ಷಕರುಗಳಿಗೆ(ಸಂಬಂಧಿಸಿದ ಪ್ರಾಂಶುಪಾಲರ ಮೂಲಕ);
2. ಸಂಬಂಧಪಟ್ಟ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್‌ಗಳು / ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಮತ್ತು ಮುಂದಿನ ಕ್ರಮಕ್ಕಾಗಿ;
3. ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ;
4. ನೋಡಲ್ ಅಧಿಕಾರಿ, ಇ-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು(ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು).

ಪ್ರತಿ:-

1. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ಶಾಖಾ ರಕ್ಷಾ ಕಡತ.